# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸ.ಕಾ.ನಿ.ಅ/ಕಾ.ಪೇ.ಉ.ವಿ/ಬೆಂ/ಸ.ಅ.ವಾ.121
ವಾರ್ಡ್ ಸಮಿತಿ ಸಭೆ/ಸಂಖ್ಯೆ.309/2020-21

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಿನಾಂಕ: 02/03/2021

## ವಾರ್ಡ್ ಸಮಿತಿ ಸಭೆಯ ಸೂಚನಾ ಪತ್ರ

**ವಿಷಯ:-** ದಿನಾಂಕ. 06.03.2021ರಂದು ಬೆಳಿಗ್ಗೆ 11.00 ಗಂಟೆಗೆ ಕಾಟನ್‌ಪೇಟೆ ಉಪವಿಭಾಗ ವಾರ್ಡ್ ಸಂಖ್ಯೆ. 121ರ ಕಛೇರಿಯಲ್ಲಿ ನಡೆಯುವ ಸಭೆಗೆ ಹಾಜರಾಗುವ ಬಗ್ಗೆ.

**ಉಲ್ಲೇಖ:-** 1) ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ. ಬಿ12(5)ಪಿ.ಆರ್/35/2020-21 ದಿನಾಂಕ. 21.09.2020.

**************

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯ, ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ ಬೃಹತ್ ನೀರುಗಾಲುವೆಗಳ ನಿರ್ವಹಣೆ, ಬೀದಿ ದೀಪಗಳ ನಿರ್ವಹಣೆ, ಕಲ್ಯಾಣ ಕಾರ್ಯಕ್ರಮಗಳು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಮಸ್ಯೆಗಳು ಹಾಗೂ ಸಾರ್ವಜನಿಕರ ಸಮಸ್ಯೆ ಕುಂದುಕೊರತೆಗಳನ್ನು ಬಗೆಹರಿಸುವಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು ವಾರ್ಡ್ ಸಂಖ್ಯೆ. 121ರ ಕಾಟನ್‌ಪೇಟೆ ಉಪವಿಭಾಗಕ್ಕೆ ಸಂಬಂಧಿಸಿದ ಮಾಹಿತಿಗಳೊಂದಿಗೆ ದಿನಾಂಕ. 06.03.2021ರ ಶನಿವಾರ ಬೆಳಿಗ್ಗೆ 11.00 ಗಂಟೆಗೆ ವಾರ್ಡ್ ಸಂಖ್ಯೆ. 121ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿಗೆ ಹಾಜರಾಗಲು ಸೂಚಿಸಿದೆ.

ಸಂಚಾಲಕರು ಮತ್ತು ಕಾರ್ಯದರ್ಶಿ
ವಾರ್ಡ್ ಸಂಖ್ಯೆ. 121, ಬಿನ್ನಿಪೇಟೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:**

1. ಶ್ರೀ ರಾಜಣ್ಣ, ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಂಖ್ಯೆ. 121, ಬಿನ್ನಿಪೇಟೆ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
2. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಾಟನ್‌ಪೇಟೆ ಉಪವಿಭಾಗ ಕಛೇರಿ, ಮಾಗಡಿ ರಸ್ತೆ, 4ನೇ ಕ್ರಾಸ್, ಬಿಬಿಎಂಪಿ ಸಂಕೀರ್ಣ.
3. ಆರೋಗ್ಯ ವೈದ್ಯಾಧಿಕಾರಿಗಳು, ಮಾಗಡಿ ರಸ್ತೆ.
4. ಸಹಾಯಕ ನಿರ್ದೇಶಕರು, ನಗರ ಯೋಜನೆ ಪಶ್ಚಿಮ, ಬಿಬಿಎಂಪಿ.
5. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಘನತ್ಯಾಜ್ಯ, ನಿರ್ವಹಣಾ ವಿಭಾಗ, ಪಶ್ಚಿಮ ಬಿಬಿಎಂಪಿ.
6. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ವಿಜಯನಗರ, ಬೆಂಗಳೂರು
7. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೆಸ್ಕಾಂ, ಮಾಗಡಿ ರಸ್ತೆ, ಬೆಂಗಳೂರು
8. ಕಲ್ಯಾಣಾಧಿಕಾರಿಗಳು, ಪಶ್ಚಿಮ ವಲಯ ಬಿಬಿಎಂಪಿ.
9. ಪೋಲೀಸ್ ಠಾಣಾಧಿಕಾರಿಗಳು, /ಸಂಚಾರಿ ಪೋಲೀಸ್ ಠಾಣೆ, ಮಾಗಡಿ ರಸ್ತೆ, ಬೆಂಗಳೂರು
10. ಎಲ್ಲಾ ವಾರ್ಡ್ ಸಮಿತಿ ಸದಸ್ಯರುಗಳು.

Scanned with CamScanner

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸ.ಕಾ.ನಿ.ಅ/ಕಾ.ಪೇ.ಉ.ವಿ/ಬೆಂ/ಪ್ರ.ದ.ಸ/
ಸಭೆಯ ನಡವಳಿ/ಸಂಖ್ಯೆ.307/2020-21

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಿನಾಂಕ : 08/3/21

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:-** ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶದ ಸಂಖ್ಯೆ. ಬಿ12(5)ಪಿ.ಆರ್/35/2020-21, ದಿನಾಂಕ. 21.09.2020ರ ಆದೇಶದಂತೆ ದಿ. 06.03.2021ರಂದು ವಾರ್ಡ್ ಸಂಖ್ಯೆ. 121, ಬಿನ್ನಿಪೇಟೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಸ್ಥಳ:** ಬಿಬಿಎಂಪಿ ಕಛೇರಿ, ಮಾಗಡಿ ರಸ್ತೆ, 4ನೇ ಕ್ರಾಸ್,

**ಸಮಯ:** ಬೆಳಿಗ್ಗೆ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| | | |
|---|---|---|
| | | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ |
| 1 | ಶ್ರೀ ರಾಜಣ್ಣ, | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, |
| 2 | ಶ್ರೀ ಕೆ.ಬಿ ತಾರಾನಾಥ್ | ಆರೋಗ್ಯ ಪರೀವೀಕ್ಷಕರು |
| 3 | ಶ್ರೀ ಶಶಿಕುಮಾರ್ | ಕೆಂಪೇಗೌಡ ಸಾಂಸ್ಕೃತಿಕ ಸಂಘದ ಸದಸ್ಯರು |
| 4 | ಶ್ರೀ ಭರತ್ ಎಸ್ | ಸದಸ್ಯರು |
| 5 | ಶ್ರೀ ರಘು | ಸದಸ್ಯರು |
| 6 | ಶ್ರೀ ಮಹೇಶ್ ಬಿ | ಹೆಲ್ಪಿಂಗ್ ಹ್ಯಾಂಡ್ಸ್ ಅಸೋಸಿಯೇಟ್ಸ್ |
| 7 | ಶ್ರೀಮತಿ ಡಾ|| ಮಣಿ | ಸದಸ್ಯರು |
| | | ಸದಸ್ಯರು |
| 8 | ಶ್ರೀಮತಿ ವಿ. ಸುಶೀಲ | ಸದಸ್ಯರು |
| 9 | ಶ್ರೀ ಎಸ್. ಗುಣ | ಸದಸ್ಯರು |
| 10 | ಶ್ರೀ ಜಿ. ಪ್ರವೀಣ್ ಕುಮಾರ್ ನಾಯ್ಡು | ಸಂಘದ ಸದಸ್ಯರು |
| 11 | ಶ್ರೀ ಮಹೇಶ್ ಬಿ.ಎನ್. | ಚಿಕ್ಕಪೇಟೆ ಉಪವಿಭಾಗ |
| 12 | ಸಹ ಕಂದಾಯ ಅಧಿಕಾರಿ, | ಕೆ.ಪಿ ಅಗ್ರಹಾರ, ಮಾಗಡಿ ರಸ್ತೆ, ಮಾಗಡಿ ರಸ್ತೆ |
| 13 | ಪೋಲೀಸ್ ಠಾಣಾಧಿಕಾರಿ | ಸಂಚಾರಿ ಪೋಲೀಸ್ ಠಾಣೆ ಅಧಿಕಾರಿಗಳು |
| 14 | ಸಂಘ ಸಂಸ್ಥೆಗಳ ಸದಸ್ಯರು | |

ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಮಿತಿಯ ಸದಸ್ಯರು ಹಾಗೂ ಅಧಿಕಾರಿಗಳು ಮತ್ತು ಸಿಬ್ಬಂದಿಗಳೊಂದಿಗೆ ಈ ಕೆಳಕಂಡ ಅಂಶಗಳನ್ನು ಚರ್ಚಿಸಲಾಯಿತು.

Scanned with CamScanner

ಹಿಂದಿನ ಸಭೆಯ ನಡವಳಿಗಳನ್ನು ಪರಿಶೀಲಿಸಲಾಯಿತು.

1. ವಾರ್ಡಿನಲ್ಲಿ ದುರಸ್ಥಿಗೊಂಡಿರುವ ವಿದ್ಯುತ್ ದೀಪಗಳನ್ನು ಸರಿಪಡಿಸಲು ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಯಿತು.
2. ವಾರ್ಡಿನಲ್ಲಿ ದುರಸ್ಥಿಗೊಂಡಿರುವ ಬೋರ್‌ಹೋಲ್‌ಗಳನ್ನು ಸರಿಪಡಿಸಲು ಅಧಿಕಾರಿಗಳಿಗೆ ಸೂಚಿಸಲಾಯಿತು.
3. ವಾರ್ಡಿನಲ್ಲಿ ದುರಸ್ಥಿಗೊಂಡಿರುವ ರಸ್ತೆಗಳನ್ನು ಶೀಘ್ರವೇ ಸರಿಪಡಿಸಲು ಅಧಿಕಾರಿಗಳಿಗೆ ಸೂಚಿಸಲಾಯಿತು.
4. ವಾರ್ಡಿನ ಪ್ರಮುಖ ಸ್ಥಳಗಳಲ್ಲಿ ಇರುವ ಚರಂಡಿಯಲ್ಲಿ ಹೂಳು ತೆಗೆಯುವುದು ಮತ್ತು ಇತರ ಕಸವನ್ನು ವಿಲೇವಾರಿ ಮಾಡುವ ಬಗ್ಗೆ ಚರ್ಚಿಸಲಾಯಿತು.
5. ರಸ್ತೆ ಬದಿಯಲ್ಲಿ ಇರುವ ಮಣ್ಣುಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.
6. ಮಾಗಡಿ ರಸ್ತೆಯ ಪಾದಚಾರಿ ಮಾರ್ಗಗಳು ದುರಸ್ಥಿಗೊಂಡಿದ್ದು, ಸದರಿ ಪಾದಚಾರಿ ಮಾರ್ಗಗಳನ್ನು ಶೀಘ್ರವಾಗಿ ಸರಿಪಡಿಸಲು ಅಧಿಕಾರಿಗಳಿಗೆ ಸೂಚಿಸಲಾಯಿತು.
7. ವಾರ್ಡಿನ ಪ್ರಮುಖ ಸ್ಥಳಗಳಲ್ಲಿ ಸೊಳ್ಳೆಯ ಔಷಧಿ ಸಿಂಪಡಣೆ ಕಾರ್ಯಗಳನ್ನು ಸಮರ್ಪಕವಾಗಿ ಕೈಗೊಳ್ಳುವ ಬಗ್ಗೆ ಆರೋಗ್ಯಾಧಿಕಾರಿಗಳಿಗೆ ಸೂಚಿಸಲಾಯಿತು.
8. ಮಾನ್ಯ ನೋಡಲ್ ಅಧಿಕಾರಿಯವರು ಮುಂದಿನ ಸಭೆಯಲ್ಲಿ ವಾರ್ಡಿನ ಕುಂದು ಕೊರತೆಗಳ ಬಗ್ಗೆ ಸಮಗ್ರವಾಗಿ ಚರ್ಚಿಸಬೇಕೆಂದು ತಿಳಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

<u>ನಿರ್ಣಯ:-</u>

ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಮುಂದಿನ ಸಭೆಯೊಳಗಾಗಿ ಶೀಘ್ರವಾಗಿ ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳಲು ಸಭೆಯು ತೀರ್ಮಾನಿಸಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ 121, ಬಿನ್ನಿಪೇಟೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ. 121, ಬಿನ್ನಿಪೇಟೆ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು, (ಆರೋಗ್ಯ ಮತ್ತು ಘ.ತ್ಯಾ.ನಿ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು, (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ಕಾರ್ಯಪಾಲಕ ಅಭಿಯಂತರರು, ಗಾಂಧಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಸಮಿತಿ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.

Scanned with CamScanner